**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 07–10–2021**

# ಪತ್ರಿಕಾ ಪ್ರಕಟಣೆ

**PRESS RELEASE**

## "ಸ್ವಚ್ಛತಾ ಶ್ರಮದಾನ" ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 07 (ಕರ್ನಾಟಕ ವಾರ್ತೆ):

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜಯಂತಿಯ ಪ್ರಯುಕ್ತ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಇಲಾಖಾ ಸಚಿವರಾದ ಕೋಟ ಶ್ರೀನಿವಾಸ ಪೂಜಾರಿಯವರ ಸೂಚನೆ ಮೇರೆಗೆ, ಉಭಯ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 5609 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ವ್ಯಾಪ್ತಿಯಲ್ಲಿನ 910 ವಸತಿ ಶಾಲೆಗಳಲ್ಲಿ 3.42 ಲಕ್ಷ ವಿದ್ಯಾರ್ಥಿಗಳು ಹಾಗೂ ಇಲಾಖೆಯ 42,000 ಸಿಬ್ಬಂದಿಗಳು ಸೇರಿ ಬೃಹತ್ "ಸ್ವಚ್ಛತಾ ಶ್ರಮದಾನ" ಕಾರ್ಯಕ್ರಮವನ್ನು ಆಯೋಜಿಸಲು ಎಲ್ಲಾ ಜಿಲ್ಲೆಗಳಿಗೆ ರಾಜ್ಯ ಮಟ್ಟದ ಹಿರಿಯ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳಾಗಿ ನಿಯೋಜಿಸಲಾಗಿರುತ್ತದೆ.

ಸಮಾಜ ಕಲ್ಯಾಣ ಸಚಿವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ, ಎಲ್ಲಾ ಅಧಿಕಾರಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳೊಂದಿಗೆ ಸೇರಿ ಸ್ವಚ್ಛತಾ ಶ್ರಮದಾನದಲ್ಲಿ ಪಾಲ್ಗೊಂಡಿದ್ದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಡಾ.ಎನ್.ನಾಗಾಂಬಿಕಾದೇವಿ, ಭಾ.ಆ.ಸೇ., ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಾದ ಡಾ.ರವಿಕುಮಾರ್ ಸುರಪುರ, ಭಾ.ಆ.ಸೇ. ರವರು ಬೆಂಗಳೂರು ನಗರ ಜಿಲ್ಲೆಯಲ್ಲಿನ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ, "ಸ್ವಚ್ಛತಾ ಶ್ರಮದಾನ" ಹಾಗೂ ಗಿಡ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ, ತದನಂತರ ಸಿಬ್ಬಂದಿ ಮತ್ತು ನಿಲಯಾರ್ಥಿಗಳಿಗೆ ಸ್ವಚ್ಛತಾ ಪಾಲನೆ ಕುರಿತು ಸೂಚನೆಗಳನ್ನು ನೀಡಿರುತ್ತಾರೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರಾದ ಪಿ.ವಸಂತಕುಮಾರ್ ಭಾ.ಆ.ಸೇ. ಅವರು ರಾಮನಗರ ಜಿಲ್ಲೆಗೆ ಭೇಟಿ ನೀಡಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಗಾಂಧಿ ಜಯಂತಿಯ ಪ್ರಯುಕ್ತ ಇಲಾಖೆಯ ಎಲ್ಲಾ ಕಛೇರಿಗಳು, ವಸತಿ ಶಾಲೆ ಹಾಗೂ ವಿದ್ಯಾರ್ಥಿನಿಲಯಗಳ ಆವರಣ ಹಾಗೂ ಕೊಠಡಿಗಳನ್ನು ಎಲ್ಲಾ ಹಿರಿಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳೆಲ್ಲಾ ಸೇರಿ ಸ್ವಚ್ಛತಾ ಶ್ರಮದಾನದಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಗಾಂಧೀಜಿಯವರ ಜೀವನ ಸಾಧನೆಗಳು, ವಿಚಾರಧಾರೆಗಳು ಹಾಗೂ ಸರಳ ಜೀವನ ಕುರಿತಾಗಿ ಅರಿವು ಮೂಡಿಸಲು ಗಾಂಧೀಜಿಯವರ ಬಗ್ಗೆ ಚಿತ್ರಕಲಾ ಸ್ಪರ್ಧೆ, ಗಿಡ ನೆಡುವ ಕಾರ್ಯಕ್ರಮ, ರಸ ಪ್ರಶ್ನೆ ಕಾರ್ಯಕ್ರಮ, ಪ್ರಬಂಧ ಸ್ಪರ್ಧೆ, ಜಾಥಾ ಕಾರ್ಯಕ್ರಮ, ವಿದ್ಯಾರ್ಥಿನಿಲಯಗಳಲ್ಲಿ ಕಸ ವಿಲೇವಾರಿ ಇನ್ನೂ ಮುಂತಾದ ಬೃಹತ್ ಸ್ವಚ್ಛತಾ ಆಂದೋಲನ ಕಾರ್ಯಕ್ರಮವನ್ನು ಕೋವಿಡ್–19 ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ, ಯಶಸ್ವಿಯಾಗಿ ನಡೆಸಲಾಗಿದೆ.

**ಛಾಯಾಚಿತ್ರ ಶೀರ್ಷಿಕೆ:**

ಕರ್ನಾಟಕ ರಾಜ್ಯದ ಭೇಟಿಗಾಗಿ ನಿನ್ನೆ ದಿನಾಂಕ: 06-10-2021ರಂದು ಬೆಂಗಳೂರಿಗೆ ಆಗಮಿಸಿದ್ದ, ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಾದ ರಾಮನಾಥ್ ಕೋವಿಂದ್ ಅವರು ಇಂದು ದಿನಾಂಕ: 07-10-2021ರಂದು ಮೈಸೂರಿಗೆ ಪ್ರವಾಸ ಕೈಗೊಂಡ ಸಮಯದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಹೆಚ್.ಎ.ಎಲ್ ವಿಮಾನ ನಿಲ್ದಾಣದಿಂದ ಆತ್ಮೀಯವಾಗಿ ಬೀಳ್ಕೊಟ್ಟರು.

ಈ ಸಮಯದಲ್ಲಿ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಮಂಜುನಾಥ್, ರಾಜ್ಯದ ಮುಖ್ಯ ಕಾರ್ಯದರ್ಶಿಗಳಾದ ಪಿ. ರವಿಕುಮಾರ್, ಪೊಲೀಸ್ ಮಹಾನಿರ್ದೇಶಕರಾದ ಪ್ರವೀಣ್ ಸೂದ್ ಹಾಗೂ ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಕಮಲ್ ಪಂತ್, ಏರ್ ಮಾರ್ಷಲ್ ಮಹೇಂದ್ರ ಸಿಂಗ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಗಣಿ ಮತ್ತು ಭೂವಿಜ್ಞಾನ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 07 (ಕರ್ನಾಟಕ ವಾರ್ತೆ):

ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಹಾಗೂ ಕೊಪ್ಪಳ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಆಚಾರ ಹಾಲಪ್ಪ ಬಸಪ್ಪ ಅವರು ಅಕ್ಟೋಬರ್ 7 ರಿಂದ 9 ರವರೆಗೆ ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ವಸತಿ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 07 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 7 ಮತ್ತು 8 ರಂದು ಕಲಬುರಗಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವಾಲಯ ಗ್ರಂಥಾಲಯದಲ್ಲಿ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 07, (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರ ಸಚಿವಾಲಯ ಗ್ರಂಥಾಲಯದಲ್ಲಿ 2021–22ರ ಸಾಲಿಗೆ ಒಂದು ವರ್ಷದ ಅವಧಿಗೆ ಅಪ್ರೆಂಟಿಸ್ ತರಬೇತಿಗಾಗಿ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಗ್ರಾಜುಯೇಟ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 04 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಪದವಿ (ಬಿ.ಎಲ್.ಐ.ಎಸ್.ಸಿ) ಪದವಿ ಪಡೆದ ಅಭ್ಯರ್ಥಿಗಳಿಗೆ ಮಾಹೆಯಾನ ರೂ.10,000/–, ಸ್ಟೈಫಂಡ್ ನೀಡಲಾಗುವುದು. ಟೆಕ್ನೀಷಿಯನ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 06 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ.8,000/–, ಟೆಕ್ನೀಷಿಯನ್ ಅಪ್ರೆಂಟಿಸ್ (ಕಮರ್ಷಿಯಲ್ ಪ್ರಾಕ್ಟೀಸ್) 01 ಹುದ್ದೆಗೆ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ.8,000/–, ಸ್ಟೈಫಂಡ್ ನಿಗಧಿಪಡಿಸಲಾಗಿರುತ್ತದೆ.

ನಿಗಧಿತ ಶಿಕ್ಷಣಾರ್ಹತೆಯನ್ನು 2019 ಮೇ ತಿಂಗಳ ನಂತರ ಪಡೆದವರು ಮಾತ್ರ ಈ ತರಬೇತಿಗೆ ಅರ್ಹರಾಗಿರುತ್ತಾರೆ. ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಮೀಸಲಾತಿಯ ಆಧಾರದ ಮೇಲೆ ನಿಯಮಾನುಸಾರ ಆಯ್ಕೆ ಮಾಡಲಾಗುವುದು. ಈಗಾಗಲೇ ಅಪ್ರೆಂಟಿಸ್ ತರಬೇತಿ ಪಡೆದವರಾಗಿದ್ದರೆ ಅಂತಹವರು ಅರ್ಜಿಗಳನ್ನು ಸಲ್ಲಿಸುವಂತಿಲ್ಲ. ಮುಕ್ತ ವಿಶ್ವವಿದ್ಯಾನಿಲಯ / ದೂರ ಶಿಕ್ಷಣದ ಮೂಲಕ ಪದವಿಗಳನ್ನು ಪಡೆದ ಅಭ್ಯರ್ಥಿಗಳನ್ನು ತರಬೇತಿಗೆ ಪರಿಗಣಿಸುವುದಿಲ್ಲ.

ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಮುಖ್ಯ ಗ್ರಂಥಾಧಿಕಾರಿ, ಸಚಿವಾಲಯ ಗ್ರಂಥಾಲಯ, ಕೊಠಡಿ ಸಂಖ್ಯೆ: 11, ನೆಲಮಹಡಿ, ವಿಧಾನಸೌಧ, ಬೆಂಗಳೂರು–560001 ಇವರಿಗೆ ಅಕ್ಟೋಬರ್ 25, 2021 ರೊಳಗೆ ಸಲ್ಲಿಸಬೇಕು. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080–22033462/3011 ಅಥವಾ ಇ–ಮೇಲ್ ವಿಳಾಸ: ksecretariatlibrary@gmail.com ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## STAFF SELECTION COMMISSION RECURTMENT

Bengaluru, October 07, (Karnataka Information) :

Staff Selection Commission (SSC) will be conducting to 271categories of Posts with 3261 vacancies (tentative) for different Ministries / Department / Organizations of the Government of India all over India through Advertisement No Phase IX/2021/selection posts.

Selection will be through Computer Based Examination (CBE) mode. Detailed advertisement along with eligibility criteria, terms and conditions and application format etc. is available on https://ssc.nic.in and http://ssckkr.kar.nic.in. The last date for receipt of allocation (online only) is 25-10-2021.

Fee is exempted for (i) all women (ii) SC / ST / EX-S / PWD (OH/HH/VH/Others) candidates who are eligible for reservation.

Widows / Divorced Women / Women judicially separated / disabled Defense personnel / domiciles of J&K / Central Government Employees etc who meet the conditions specified in the examination notice are eligible for certain age relaxation benefit for some posts as mentioned in the notice.

The above said advertisement includes 14 categories of posts with 117 vacancies in respect of Karnataka – Kerala Region with different essential qualification in different subjects of Girl Cadet Instructor, Technical Superintendent (Processing), Technical Superintendent (Weaving), Textile Designer, Research Associate (Physical Anthropology Division), Library and Information Assistant, Research Associate (Cultural Anthropology), Scientific Assistant (Computer Science), Scientific Assistant (Electrical), Scientific Assistant (Electronics), Assistant Welfare Administrator, Junior Grade of Indian Information Service Gr “B” in M/o I&B, Deputy Ranger and Field man posts.

## ನೆಹರು ಯುವ ಕೇಂದ್ರದ ರಾಜ್ಯ ನಿರ್ದೇಶಕರಾಗಿ ಎಂ.ಎನ್.ನಟರಾಜ್ ಅಧಿಕಾರ ಸ್ವೀಕಾರ

ಬೆಂಗಳೂರು, ಅಕ್ಟೋಬರ್ 07, (ಕರ್ನಾಟಕ ವಾರ್ತೆ):

ಭಾರತ ಸರ್ಕಾರದ ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯದ ಕರ್ನಾಟಕ ರಾಜ್ಯ ನೆಹರು ಯುವ ಕೇಂದ್ರಗಳ ರಾಜ್ಯ ನಿರ್ದೇಶಕರಾಗಿ ಎಂ.ಎನ್.ನಟರಾಜ್ ಅವರು ಇತ್ತೀಚೆಗೆ ಅಧಿಕಾರ ಸ್ವೀಕರಿಸಿದ್ದಾರೆ.

ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯದ ನೆಹರು ಯುವ ಕೇಂದ್ರ ಸಂಘಟನೆಯ ಹಿರಿಯ ಅಧಿಕಾರಿಯಾದ ಇವರು ತಮಿಳುನಾಡು ಮತ್ತು ಪಾಂಡಿಚೇರಿ ರಾಜ್ಯಗಳ ರಾಜ್ಯ ನಿರ್ದೇಶಕರಾಗಿ ಕಳೆದ ಮೂರು ವರ್ಷಗಳು ಕಾರ್ಯನಿರ್ವಹಿಸಿದ್ದಾರೆ.

ಈ ಹಿಂದೆ ಗುಲ್ಬರ್ಗಾ, ಮೈಸೂರು, ಬಿಜಾಪುರ, ಹಾಸನ ಜಿಲ್ಲೆಗಳಲ್ಲಿ ಹಾಗೂ ನವದೆಹಲಿಯಲ್ಲಿ ಹಲವು ಹುದ್ದೆಗಳನ್ನು ನಿರ್ವಹಿಸಿದ ಅನುಭವವನ್ನು ಹೊಂದಿರುತ್ತಾರೆ. ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳ ನೆಹರು ಯುವ ಕೇಂದ್ರಗಳು ರಾಜ್ಯ ನಿರ್ದೇಶಕರ ವ್ಯಾಪ್ತಿಗೆ ಒಳಪಡುತ್ತವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿಧಾನಸಭಾ ಉಪ ಚುನಾವಣೆಯ ಪ್ರಚಾರಕ್ಕೆ ಸಮಯದ ನಿರ್ಬಂಧ

ಬೆಂಗಳೂರು, 07 ಅಕ್ಟೋಬರ್ (ಕರ್ನಾಟಕ ವಾರ್ತೆ):

ರಾಜ್ಯದ ಸಿಂಧಗಿ ಹಾಗೂ ಹಾನಗಲ್ ವಿಧಾನಸಭಾ ಕ್ಷೇತ್ರಗಳಿಗೆ ನಡೆಯುತ್ತಿರುವ ಉಪಚುನಾವಣೆಯ ಪ್ರಚಾರದ ಸಮಯವನ್ನು ಕೋವಿಡ್-19 ಕಾರಣದಿಂದ ಸಂಜೆ 7:00 ಗಂಟೆಯಿಂದ ಬೆಳಿಗ್ಗೆ 10:00 ಗಂಟೆಯವರೆಗೆ ನಿರ್ಬಂಧಿಸಿ ಭಾರತ ಚುನಾವಣಾ ಆಯೋಗ ಆದೇಶ ಹೊರಡಿಸಿದೆ.

ಅದೇ ರೀತಿಯಲ್ಲಿ ಮತ ಎಣಿಕೆಯ ದಿನ ಮತ ಎಣಿಕೆ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಚುನಾವಣಾ ಅಧಿಕಾರಿ/ಸಿಬ್ಬಂಧಿಗಳು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಕೋವಿಡ್-19 ನಿರೋಧಕ ಎರಡು ಲಸಿಕೆಗಳನ್ನು ಪಡೆದಿರಬೇಕು ಅಥವಾ ಒಂದು ಲಸಿಕೆ ಪಡೆದವರು ಮತ ಎಣಿಕೆ ದಿನದ ಮುಂಚಿನ 72 ಗಂಟೆಯೊಳಗಿನ RTPCR ಪ್ರಮಾಣ ಪತ್ರವನ್ನು ಸಂಬಂಧಿಸಿಧ ಮತ ಎಣಿಕೆ ಕೇಂದ್ರದ ಅಧಿಕಾರಿಗೆ ಸಲ್ಲಿಸಿ ಮತ ಎಣಿಕೆ ಕಾರ್ಯದಲ್ಲಿ ಭಾಗವಯಿಸಬಹುದು ಎಂದು ಆಯೋಗದ ಆದೇಶ ತಿಳಿಸಿದೆ.

ಈ ಕುರಿತು ಇಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯಲ್ಲಿ ಆಯೋಗದ ಆದೇಶಗಳ ಕುರಿತು ತಿಳಿಸಿದರು.

ಪ್ರಸ್ತುತ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಅಭ್ಯರ್ಥಿಗಳ ಚುನಾವಣಾ ಒಟ್ಟು ಖರ್ಚನ್ನು 30,80,000 ರೂ.ಗಳಿಗೆ ಮಿತಿಗೊಳಿಸಿ ಆಯೋಗ ಆದೇಶ ಹೊರಡಿಸಿರುವುದನ್ನು ಮುಖ್ಯ ಚುನಾವಣಾಧಿಕಾರಿಗಳು ತಿಳಿಸಿದರು.

ಚುನಾವಣಾ ಸಮಯದಲ್ಲಿ ತೆಗೆದುಕೊಳ್ಳಲಾಗಿರುವ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

**ದಿನಾಂಕ: 7.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 32 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 78 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 38 | ಉತ್ತಮ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 46 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 54 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 66 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 41 | ಉತ್ತಮ | CO |
| **(7.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 46 | ಉತ್ತಮ | $NO_2$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 7.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 32 | Good | CO |

| | | | | |
|---|---|---|---|---|
| 2 | Jayanagar 5th Block, Shalini ground | 78 | Satisfactory | CO |
| 3 | KAVIKA, Mysore Road | 38 | Good | CO |
| 4 | Rajeev Gandhi Institute of Chest Disease, NIMHANS, Hombegowda Nagar | 46 | Good | CO |
| 5 | HSR Layout, near Central Silkboard | 54 | Satisfactory | CO |
| 6 | City Railway Station, Magestic, Bengaluru | 66 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 41 | Good | CO |
| **(7.10.2021 at 10.05 AM)** | | | | |
| 8 | BWSSB, Kadabesanahalli | 46 | Good | $NO_2$ |
| 9 | Peenya | * | * | * |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |